**ಕರ್ನಾಟಕ ಸರ್ಕಾರ**

**ಮೀನುಗಾರಿಕೆ ನಿರ್ದೇಶನಾಲಯ**

**ಮೀನುಗಾರಿಕೆ ಕ್ಷೇತ್ರಪಾಲಕರ ಹುದ್ದೆಗೆ ನೇಮಕಾತಿ ಪ್ರಾಧಿಕಾರ**

3ನೇ ಮಹಡಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ

ಡಾ. ಅಂಬೇಡ್ಕರ್ ವೀದಿ, ಬೆಂಗಳೂರು 560 001

ಸಂಖ್ಯೆ:ಮೀನಿ/75/ಸಿಬ್ಬಂದಿ(2)2012-2013 ದಿನಾಂಕ: 18/11/2015.

1 ಲಿಖಿತ ಪರೀಕ್ಷೆಯು ವಸ್ತುನಿಷ್ಠ ಬಹು ಆಯ್ಕೆ (Multiple Objective Choice Type) ಮಾದರಿಯ ಎರಡು ಪತ್ರಿಕೆಗಳನ್ನು ಹೊಂದಿರುತ್ತದೆ.

ಸಾಮಾನ್ಯ ಜ್ಞಾನ - 50 ಅಂಕಗಳು – ಒಂದು ಘಂಟೆ ಅವಧಿ

ಸಾಮಾನ್ಯ ಕನ್ನಡ - 50 ಅಂಕಗಳು – ಒಂದು ಘಂಟೆ ಅವಧಿ

2 ಸಾಮಾನ್ಯ ಜ್ಞಾನ ಪತ್ರಿಕೆಯು ಸಾಮಾನ್ಯವಾಗಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗೆ ಇರಬೇಕಾದ ಸಾಮಾನ್ಯ ಜ್ಞಾನಕ್ಕೆ ಸಂಬಂಧಪಟ್ಟ ಕನಿಷ್ಠ ವಿದ್ಯಾಮಟ್ಟಕ್ಕೆ ಸಮನಾಗಿರುವುದು ಮತ್ತು ಇದು ಭಾರತದ ಸಂವಿಧಾನ, ಭಾರತದ ಇತಿಹಾಸ ಮತ್ತು ಸಂಸ್ಕೃತಿ, ಸಾಮಾನ್ಯ ಅರ್ಥಶಾಸ್ತ್ರ, ಭೂಗೋಳ ಶಾಸ್ತ್ರ ಇತ್ತೀಚಿನ ಘಟನೆಗಳು, ದೈನಿಕ ಜೀವನ ದಲ್ಲಿ ವಿಜ್ಞಾನ ಮತ್ತು ಒಬ್ಬ ವಿದ್ಯಾವಂತ ವ್ಯಕ್ತಿಯು ದೈನಂದಿನ ಜೀವನದಲ್ಲಿ ಗಮನಿಸ ಬಹುದಾದಂತಹ ವಿಷಯಗಳ ಮೇಲಿನ ಪ್ರಶ್ನೆಗಳನ್ನು ಒಳಗೊಂಡಿರುತ್ತದೆ.

3 ಸಾಮಾನ್ಯ ಕನ್ನಡ ಪತ್ರಿಕೆಯು ಸಾಮಾನ್ಯವಾಗಿ ಕೆ.ಎಸ್.ಇ. ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣನಾಗಿರುವ ವಿದ್ಯಾರ್ಥಿಗೆ ಇರಬೇಕಾದ ಕನಿಷ್ಠ ವಿದ್ಯಾಮಟ್ಟಕ್ಕೆ ಸಮನಾಗಿರುವುದು. ಇದರ ಮೂಲಕ ಅಭ್ಯರ್ಥಿಯ ಕನ್ನಡ, ವ್ಯಾಕರಣ, ಶಬ್ದಸಂಪತ್ತು, ಕಾಗುಣಿತ ಸಮಾನಾರ್ಥಕ ಪದಗಳು, ವಿರುದ್ಧಾತ್ಮಕ ಪದಗಳು ಇವುಗಳ ಪರಿಜ್ಞಾನ, ಕನ್ನಡ ಭಾಷೆಯನ್ನು ಅರಿಯುವ ಮತ್ತು ಗ್ರಹಿಸುವ ಅಭ್ಯರ್ಥಿಯ ಶಕ್ತಿಯ ಮತ್ತು ಅದರ ಸರಿಯಾದ ಹಾಗೂ ತಪ್ಪು ಬಳಕೆ ಇತ್ಯಾದಿಗಳನ್ನು ಪರಿಶೀಲಿಸುವ ಅಭ್ಯರ್ಥಿಯ ಸಾಮರ್ಥ್ಯ ಇವುಗಳನ್ನು ಪರೀಕ್ಷಿಸಲು ಉದ್ದೇಶಿಸಲಾಗಿದೆ.